ಜಿಲ್ಲೆಗಳಲ್ಲಿ ಮಾತ್ರ ಉಪಯೋಗಿಸಲು ಅವಕಾಶವಿದೆ. ಅವುಗಳನ್ನು ಮೈಸೂರು ಬೆಂಗಳೂರಿಗೆ ಮತ್ತು ಇತರ ಜಿಲ್ಲೆಗಳಿಗೆ ಸಾಗಿಸಲು ಅನುಮತಿ ನೀಡಲು ಬರುವುದಿಲ್ಲ.

ಜಲಕ್ರೀಡೆಯ ಕ್ರೀಡಾಪಟುಗಳ ಕುರಿತು.

2540 - ಶ್ರೀ ಎಂ.ಪಿ. ಅಪ್ಪಚ್ಚುರಂಜನ್ (ಸೋಮವಾರಪೇಟೆ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಜಲಕ್ರೀಡೆಗಾಗಿ ಕ್ರೀಡಾಪಟುಗಳು ಮತ್ತು ತರಬೇತುದಾರರಾಗಿ ಸುಮಾರು ಎಪ್ಪತ್ತು ಜನರು ಕೊಲಂಬಿಯಾಕ್ಕೆ ಹೋಗಿರುವ ವಿಷಯ ಸರಕಾರದ ಗಮನಕ್ಕೆ ಬಂದಿದೆಯೇ?*

ಆ) *ಇವರ ಪಿಚ್ರ್ಯು ವೆಚ್ಚವನ್ನು ಸರ್ಕಾರ ಭರಿಸುತ್ತದೆಯೇ, ಎಷ್ಟು ಮತ್ತು ಹೇಗೆ ಒದಗಿಸಲಾಗುತ್ತದೆ?*

ಇ) *"ಏಷಿಯನ್ ಸ್ವಿಮಿಂಗ್ ಫೆಡರೇಷನ್ ಆಫ್ ಇಂಡಿಯಾ" ಇದರ ವೆಚ್ಚವನ್ನು ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಭರಿಸುತ್ತದೆಯೇ?*

ಶ್ರೀ ಅಜಯ ಕುಮಾರ್ ಸರ್‌ನಾಯಕ್ (ಯುವ ಜನ ಸೇವಾ ಹಾಗೂ ಕ್ರೀಡಾ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ

ಇ) ಇಲ್ಲ.

ಪ್ರೌಢ ಶಿಕ್ಷಣ ಮಂಡಲಿಯಲ್ಲಿ ಸಿಬ್ಬಂದಿ ಕೊರತೆ.

2399 - ಶ್ರೀ ಬಸನಗೌಡ ಪಾಟೀಲ್ (ವಿಜಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ಅಲ್ಲಿನ ಕೆಲಸ ಕಾರ್ಯಗಳು ತೀವ್ರ ವಿಳಂಬವಾಗಿ, ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಲ್ಲಿ, ಈ ಸಮಸ್ಯೆಯ ಪರಿಹಾರಕ್ಕಾಗಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು?*

ಶ್ರೀ ಹೆಚ್.ಜಿ. ಗೋವಿಂದ ಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ವಿಜಾಪುರ ನಗರದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಾಣ.

2409 - ಶ್ರೀ ಬಸನಗೌಡ ಪಾಟೀಲ್ (ವಿಜಾಪುರ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ವಿಜಾಪುರ ನಗರದಲ್ಲಿ ನಿರ್ಮಿಸಬೇಕಾಗಿರುವ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಸರ್ಕಾರದ ಪರಿಶೀಲನೆಯಲ್ಲಿಯೇ?*

ಆ) *ಇದ್ದಲ್ಲಿ ಎಂದಿನಿಂದ ಈ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು?*

ಇ) *ಮತ್ತು ಎಂದು ಈ ನಿರ್ಮಾಣ ಕಾರ್ಯ ಪೂರ್ಣಗೊಳ್ಳುವುದು?*

ಶ್ರೀ ಅಜಯ ಕುಮಾರ್ ಸರ್ ನಾಯಕ್ (ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :